## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿನ ಸ್ಟಾರ್ ಕ್ಲಾಸಿಫೈಡ್ ಹೋಟೆಲ್ ಗಳನ್ನು ಕೈಗಾರಿಕೆ ಸ್ಥಾನಮಾನ ನೀಡಿ, ಪ್ರಮಾಣ ಪತ್ರವನ್ನು ನೀಡುವ ಹಾಗೂ ಮಾರ್ಗಸೂಚಿಗಳನ್ನು ತಯಾರಿಸುವ ಸಂಬಂಧ ಸಮಿತಿ ರಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಸಿಐ 86 ಎಸ್.ಪಿ.ಐ 2021, ದಿನಾಂಕ:04.03.2021.
2. ಕೈಗಾರಿಕಾಭಿವೃದ್ಧಿ ಆಯುಕ್ತರು ಮತ್ತು ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರ ಪತ್ರ ಸಂಖ್ಯೆ: ಕ.ಉ.ಮಿ/ಇ-8/51/2021-22, ದಿನಾಂಕ: 05.06.2021.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ ರಾಜ್ಯದಲ್ಲಿನ Star Classified Hotel ಗಳನ್ನು ದಿನಾಂಕ:01.04.2021 ರಿಂದ "ಕೈಗಾರಿಕೆ" ಎಂದು ಸ್ಥಾನಮಾನ ನೀಡಿ, ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರು ಪ್ರವಾಸೋದ್ಯಮ ಇಲಾಖೆಯೊಂದಿಗೆ ಸಮಾಲೋಚಿಸಿ ಮಾರ್ಗಸೂಚಿಗಳನ್ನು ತಯಾರಿಸಿ ಸರ್ಕಾರದ ಅನುಮೋದನೆ ಪಡೆಯಲು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಆದೇಶವನ್ನು ಹೊರಡಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಿಐ 86 ಎಸ್.ಪಿ.ಐ 2021, ದಿನಾಂಕ:04.03.2021ರನ್ವಯ ರಾಜ್ಯದಲ್ಲಿನ ಸ್ಟಾರ್ ಕ್ಲಾಸಿಫೈಡ್ ಹೋಟೆಲ್ ಗಳನ್ನು ದಿನಾಂಕ:01.04.2021ರಿಂದ "ಕೈಗಾರಿಕೆ" ಎಂದು ಸ್ಥಾನಮಾನ ನೀಡಿ, ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಪ್ರಮಾಣ ಪತ್ರ ಪಡೆಯಲು ಹಾಗೂ ಸದರಿಯವರು ಪ್ರವಾಸೋದ್ಯಮ ಇಲಾಖೆಯೊಂದಿಗೆ ಸಮಾಲೋಚಿಸಿ ಮಾರ್ಗಸೂಚಿಯನ್ನು ತಯಾರಿಸಿ ಸರ್ಕಾರದ ಅನುಮೋದನೆಗೆ ಕಳುಹಿಸಲು ನಿರ್ದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಈ ಸಂಬಂಧ ದಿ:29.03.2021ರಂದು ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪ್ರವಾಸೋದ್ಯಮ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಇಂಧನ ಇಲಾಖೆ ಹಾಗೂ ನಾಲೇಡ್ಜ್ ಪಾರ್ಟನರ್ ಪ್ರವಾಸೋದ್ಯಮ ಇಲಾಖೆ ಮತ್ತು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಸದಸ್ಯರನ್ನೊಳಗೊಂಡ ಸಭೆಯನ್ನು ಆಯೋಜಿಸಿ, ಸಮಿತಿಯು ಪ್ರಮಾಣ ಪತ್ರ ನೀಡುವ ಮತ್ತು ಮಾರ್ಗಸೂಚಿ ತಯಾರಿಸುವ ಸಂಬಂಧ ಚರ್ಚಿಸಿ ತೀರ್ಮಾನಿಸಿರುವಂತೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿರ್ದೇಶನಾಲಯದ ಹಂತದಲ್ಲಿ ಸ್ಟಾರ್ ಕ್ಲಾಸಿಫೈಡ್ ಹೋಟೆಲ್ ಇಂಡಸ್ಟ್ರೀಸ್‌ಗಳಿಗೆ ಪ್ರಮಾಣ ಪತ್ರ ಹೊರಡಿಸುವ ಅಗತ್ಯವಿಲ್ಲದಿರುವುದರಿಂದ ವಿದ್ಯುತ್ ದರ ಮತ್ತು ಆಸ್ತಿ ತೆರಿಗೆಗೆ ಸಂಬಂಧಿಸಿದಂತೆ ಉದ್ಯಮದ ಸ್ಥಾನಮಾನದ ಪ್ರಯೋಜನಗಳನ್ನು ಆಯಾ ಇಲಾಖೆಯೇ ನೀಡುವುದು ಸೂಕ್ತವಾಗಿದೆ ಎಂದು ಅಭಿಪ್ರಾಯಿಸಿ, ಸಭೆಯಲ್ಲಿ ತೀರ್ಮಾನಿಸಲಾದ ಅಂಶಗಳ ಬಗ್ಗೆ ಅನುಮೋದನೆ ನೀಡುವಂತೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಟಿಒಆರ್ 162 ಟಿಡಿಓ 2020,**
**ಬೆಂಗಳೂರು, ದಿನಾಂಕ: 18 -06-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದಲ್ಲಿನ Star Classified Hotel ಗಳನ್ನು ದಿ:01.04.2021 ರಿಂದ "ಕೈಗಾರಿಕೆ" ಎಂದು ಸ್ಥಾನಮಾನ ನೀಡಿ, ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆರವರು ಪ್ರವಾಸೋದ್ಯಮ ಇಲಾಖೆಯೊಂದಿಗೆ

..2/-

ಸಮಾಲೋಚಿಸಿ ಮಾರ್ಗಸೂಚಿಗಳನ್ನು ತಯಾರಿಸುವ ಸಂಬಂಧ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಕೆಳಕಂಡ ಸದಸ್ಯರನ್ನೊಳಗೊಂಡ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಚಿಸಲಾಗಿದೆ.

1. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ - ಅಧ್ಯಕ್ಷರು
2. ನಿರ್ದೇಶಕರು, ಇಂಧನ ಇಲಾಖೆ - ಸದಸ್ಯರು
3. ಜಂಟಿ ಆಯುಕ್ತರು (ಯೋಜನೆ), ಪೌರಾಡಳಿತ ನಿರ್ದೇಶನಾಲಯ - ಸದಸ್ಯರು
4. ನಿರ್ದೇಶಕರು (ಅಭಿವೃದ್ಧಿ) ಪಂಚಾಯತ್ ರಾಜ್ ಇಲಾಖೆ - ಸದಸ್ಯರು
5. ಉಪ ಕಾರ್ಯದರ್ಶಿಗಳು-2, ನಗರಾಭಿವೃದ್ಧಿ ಇಲಾಖೆ - ಸದಸ್ಯರು
6. ಜಂಟಿ ಆಯುಕ್ತರು, (ಕಂದಾಯ) ಬಿ.ಬಿ.ಎಂ.ಪಿ. - ಸದಸ್ಯರು
7. ಅಪರ ಆಯುಕ್ತರು (ಆರ್ಥಿಕ) ಬಿ.ಬಿ.ಎಂ.ಪಿ. - ಸದಸ್ಯರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Vimalakshi 18/06/2021

**[ವಿಮಲಾಕ್ಷಿ. ಬಿ]**
ಸರ್ಕಾರದ ಅಧೀನ ಕಾರ್ಯದರ್ಶಿ
ಪ್ರವಾಸೋದ್ಯಮ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು (ಲೆಕ್ಕಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಖನಿಜ ಭವನ, ಬೆಂಗಳೂರು.
6. ನಿರ್ದೇಶಕರು, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಜಂಟಿ ಆಯುಕ್ತರು (ಯೋಜನೆ), ಪೌರಾಡಳಿತ ಇಲಾಖೆ, ಬೆಂಗಳೂರು .
8. ನಿರ್ದೇಶಕರು (ಅಭಿವೃದ್ಧಿ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಉಪ ಕಾರ್ಯದರ್ಶಿಗಳು-2, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
10. ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ (ಕಂದಾಯ) ಬೆಂಗಳೂರು.
11. ಅಪರ ಆಯುಕ್ತರು, ಬಿ.ಬಿ.ಎಂ.ಪಿ (ಆರ್ಥಿಕ), ಬೆಂಗಳೂರು.
12. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ಪ್ರವಾಸೋದ್ಯಮ, ಪರಿಸರ ಮತ್ತು ಜೀವಿಶಾಸ್ತ್ರ, ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ,ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರವಾಸೋದ್ಯಮ ಇಲಾಖೆ, ವಿಕಾಸ ಸೌಧ, ಬೆಂಗಳೂರು.

****